**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ರವರು ಶೂನ್ಯ ವೇಳೆಯಲ್ಲಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ**

**ವಿಷಯ:-** ಉಡುಪಿ ಜಿಲ್ಲೆಯ ಬ್ರಹ್ಮಾವರದ ದ.ಕ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಯು ಪುನಶ್ಚೇತನ ಮತ್ತು ಕಾರ್ಖಾನೆಯನ್ನು ಸಾಲ ಮುಕ್ತಗೊಳಿಸುವ ಭರವಸೆಯೊಂದಿಗೆ 6-11-2020 ರಂದು ಆಯ್ಕೆ ಆದ 10 ಸದಸ್ಯರ ಆಡಳಿತ ಮಂಡಳಿಯು ಸಾಲಮರುಪಾವತಿ ಹೆಸರಿನಲ್ಲಿ ಕಾರ್ಖಾನೆಯ ತಳಪಾಯದ ಕಲ್ಲನ್ನೂ ಬಿಡದೆ ಕಿತ್ತು ಮಾರಾಟ ಮಾಡಿರುವುದಲ್ಲದೇ ಕಾರ್ಖಾನೆಯ ಗುಜರಿ (ಸ್ಕ್ಯಾಪ್) ಮಾರಾಟ ಪ್ರಕ್ರಿಯೆಯಲ್ಲಿ ನಿಯಮಬಾಹಿರವಾಗಿ ವರ್ತಿಸಿ, ಸರ್ಕಾರಕ್ಕೆ ಹಾಗೂ ರೈತರಿಗೆ 14 ಕೋಟಿ ರೂ.ಗಳಿಗೂ ಹೆಚ್ಚಿನ ಪ್ರಮಾಣದ ಮೊತ್ತವನ್ನು ವಂಚಿಸಿದೆ. ಅಲ್ಲದೇ ಈ ಬಗ್ಗೆ ನ್ಯಾಯಾಲಯದ ಆದೇಶದಂತೆ ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ 25.10.2023ರಂದು ಕ್ರೈಂ 0203/2023 ರಂತೆ ಪ್ರಕರಣ ದಾಖಲಾಗಿದೆಯಾದರೂ ಪ್ರಕರಣದಲ್ಲಿ ಆಪಾದಿತವಾಗಿರುವ ಅಧಿಕಾರಿಗಳ ತನಿಖೆ ನಡೆಸಲು ಸರ್ಕಾರದ ಪೂರ್ವಾನುಮತಿ ಪಡೆಯುವುದಕ್ಕಾಗಿ 14-8-2024 ರಂದು ಪೊಲೀಸ್ ಇಲಾಖೆಯು ರಾಜ್ಯ ಸರ್ಕಾರದ ಒಳಾಡಳಿತ ಇಲಾಖೆಯನ್ನು ಕೋರಿದ್ದರೂ, ಇಲ್ಲಿ ತನಕ ಪೂರ್ವಾನುಮತಿ ದೊರೆತಿಲ್ಲ.

ರೈತ ಸಂಘದ ಅಧ್ಯಕ್ಷರಾದ ವಿಧಾನ ಪರಿಷತ್ತಿನ ಮಾಜಿ ಸಭಾಪತಿಗಳಾದ ಶ್ರೀ ಪ್ರತಾಪಚಂದ್ರಶೆಟ್ಟಿ ರವರ ನೇತೃತ್ವದಲ್ಲಿ ಬ್ರಹ್ಮಾವರದ ಸಕ್ಕರೆ ಕಾರ್ಖಾನೆ ಗೇಟ್‌ನ ಬಳಿಯಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುತ್ತಿದ್ದು, ಕಳೆದ 10 ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿದ್ದು, ಈ ಭಾಗದ ಎಲ್ಲಾ ರೈತರು ಇದರಲ್ಲಿ ಪಾಲ್ಗೊಂಡಿದ್ದಾರೆ. ಜಿಲ್ಲೆಯ ಹಿತಾಶಕ್ತಿಯ ದೃಷ್ಠಿಯಿಂದ ಈ ಹಗಲು ದರೋಡೆ ಪ್ರಕರಣವನ್ನು ಭೇದಿಸಿ, ಅನ್ಯಾಯಕ್ಕೆ ಒಳಗಾಗಿರುವ ಜಿಲ್ಲೆಯ ರೈತರಿಗೆ ಹಾಗೂ ಜನಸಾಮಾನ್ಯರಿಗೆ ನ್ಯಾಯ ಕೊಡಿಸುವ ಬಗ್ಗೆ ಹಾಗೂ ರಾಜ್ಯದ ಬೊಕ್ಕಸಕ್ಕೆ ನಷ್ಟ ಮಾಡಿರುವವರ ವಿರುದ್ಧ ಸಮರ್ಪಕವಾಗಿ ತನಿಖೆ ನಡೆಸುವ ವಿಚಾರವು ಅತಿ ಮಹತ್ವದ ವಿಚಾರವಾಗಿದ್ದು, ರಾಜ್ಯದ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಸಚಿವರು ಈ ಬಗ್ಗೆ ಕೂಡಲೇ ಕ್ರಮಕೈಗೊಂಡು ಅನಿರ್ದಿಷ್ಟಾವಧಿ ಮುಷ್ಕರವನ್ನು ಮಾಡುತ್ತಿರುವ ರೈತರಿಗೆ ನ್ಯಾಯವನ್ನು ಒದಗಿಸಿಕೊಡಬೇಕಾಗಿ ಮತ್ತು ನಕ್ಕರೆ ಕಾರ್ಖಾನೆಯನ್ನು ನೆಲಸಮಮಾಡಿ ರೈತವರ್ಗಕ್ಕೆ ಅನ್ಯಾಯ ಮಾಡಿದವರ ವಿರುದ್ಧ ಕೂಡಲೇ ಕ್ರಮತೆಗೆದುಕೊಳ್ಳಬೇಕೆಂದು ತಮ್ಮ ಮೂಲಕ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಸರ್ಕಾರದ ಉತ್ತರ:-**

ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ- ಉಡುಪಿ ಜಿಲ್ಲೆ – ಈ ಕಾರ್ಖಾನೆಯ ಗುಜರಿ ವಸ್ತುಗಳ ಮಾರಾಟದಲ್ಲಿ ರೂ.14.00 ಕೋಟಿಗಳಿಗೂ ಹೆಚ್ಚಿನ ವಂಚನೆಯನ್ನು ಎಸಗಲಾಗಿದ್ದು, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ಮೇಲೆ ಮತ್ತು ಸರ್ಕಾರದ ಕಾಯಿದೆ, ನಿಯಮ ಮತ್ತು ಬೈಲಾಗಳನ್ನು ದುರುದ್ದೇಶದಿಂದ ಉಲ್ಲಂಘಿಸಿರುವ ಕುರಿತು ಸೂಕ್ತ ತನಿಖೆಯನ್ನು ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಶ್ರೀ ವಿನಯ್‌ಕುಮಾರ್ ಸೊರಕೆ, ಮಾಜಿ ಸಚಿವರು ಹಾಗೂ ಪ್ರಧಾನ ಕಾರ್ಯದರ್ಶಿ, ಉಡುಪಿ ಜಿಲ್ಲಾ ರೈತ ಸಂಘ, ಉಡುಪಿ ಜಿಲ್ಲೆ ಮತ್ತು ಶ್ರೀ ಮಂಜುನಾಥ ಭಂಡಾರಿ, ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ತು ಇವರು ದಿನಾಂಕ:25.09.023 ಮತ್ತು 09.11.2023ರಂದು ಸರ್ಕಾರಕ್ಕೆ ಮನವಿ ಮತ್ತು ದೂರುಗಳನ್ನು ಸಲ್ಲಿಸಿದ್ದರು.

ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ- ಉಡುಪಿ ಜಿಲ್ಲೆ – ಈ ಕಾರ್ಖಾನೆಯ ಗುಜರಿ ವಸ್ತುಗಳ ಮಾರಾಟದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಆರೋಪಗಳ ಕುರಿತು ಪರಿಶೀಲಿಸಿ ವಾಸ್ತವಾಂಶವುಳ್ಳ ವರದಿಯೊಂದಿಗೆ ಈ ಪ್ರಕರಣದಲ್ಲಿ ಕೈಗೊಳ್ಳಬಹುದಾದ

..2

ಅಭಿಪ್ರಾಯವನ್ನು ಕೂಡಲೇ ಸರ್ಕಾರಕ್ಕೆ ಕಳುಹಿಸಿ ಕೊಡುವಂತೆ ದಿನಾಂಕ:25.10.2023 ಮತ್ತು 16.01.2024ರ ಪತ್ರಗಳಲ್ಲಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರನ್ನು ಕೋರಲಾಗಿತ್ತು.

ಕಾರ್ಖಾನೆಯ ಸ್ಕ್ಯಾಪ್ ಹಳೆಯ ಯಂತ್ರೋಪಕರಣಗಳ ಮಾರಾಟದಲ್ಲಿ ನಿಯಮಬಾಹಿರವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 64 ರ ಶಾಸನಬದ್ದ ವಿಚಾರಣೆಗೆ ಕ್ರಮ ಕೈಗೊಳ್ಳುವಂತೆ ಸಹಕಾರ ಸಂಘಗಳ ಉಪ ನಿಬಂಧಕರು (ಪ್ರ), ಉಡುಪಿ ಜಿಲ್ಲೆ, ಉಡುಪಿ ಇವರು ದಿನಾಂಕ: 24.11.2023ರ ಪತ್ರದಲ್ಲಿ ಕೋರಿರುತ್ತಾರೆಂದು, ಕಾರ್ಖಾನೆಯ ಹಳೆಯ ಯಂತ್ರೋಪಕರಣಗಳ ಮಾರಾಟದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಸಂಬಂಧ ಉಡುಪಿ ಜಿಲ್ಲಾ ರೈತ ಸಂಘದವರು ಮಾನ್ಯ ಎಸಿಜೆ ಮತ್ತು ಜೆಎಂಎಫ್‌ಸಿ, ಉಡುಪಿ ನ್ಯಾಯಾಲಯದಲ್ಲಿ ಖಾಸಗಿ ದೂರು ಸಂಖ್ಯೆ:163/2023ನ್ನು ದಾಖಲಿಸಿದ್ದು, ಸದರಿ ದೂರಿನನ್ವಯ ಬ್ರಹ್ಮಾವರ ಪೊಲೀಸ್ ಠಾಣೆಯ ಉಪ ನಿರೀಕ್ಷಕರು ಕಾರ್ಖಾನೆಯ 03 ಕಂಪ್ಯೂಟರ್ ಹಾರ್ಡ್‌ಡಿಸ್ಕ್ ಗಳನ್ನು ವಶಕ್ಕೆ ಪಡೆದಿರುತ್ತಾರೆಂದು ಹಾಗೂ ಈ ಸಂಬಂಧದ ಪ್ರಕರಣದ ವಿಚಾರಣೆಯು ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುವುದರಿಂದ ಕಲಂ 64 ರ ವಿಚಾರಣೆಗೆ ಆದೇಶಿಸುವುದು ಸಮಂಜಸವಾಗಲಾರದು ಎಂದು ತಿಳಿಸುತ್ತಾ, ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಬ್ರಹ್ಮಾವರ, ಉಡುಪಿ ಜಿಲ್ಲೆ- ಈ ಕಾರ್ಖಾನೆಯ ಹಳೆಯ ಯಂತ್ರೋಪಕರಣಗಳ ಮಾರಾಟದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಸಂಬಂಧ ನಿವೃತ್ತ ನ್ಯಾಯಾಧೀಶರಿಂದ ತನಿಖೆ ನಡೆಸಲು ಕೋರಿ ದಿನಾಂಕ:30.01.2024ರಂದು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಸಿಐ 313 ಸಿಓಎಫ್ 2023, ದಿನಾಂಕ:20.11.2024 ರಲ್ಲಿ, ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ, ಉಡುಪಿ ಜಿಲ್ಲೆ –ಈ ಕಾರ್ಖಾನೆಯ ಹಳೆಯ ಯಂತ್ರೋಪಕರಣಗಳ ಟೆಂಡರ್‌ನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಆರೋಪಗಳ ಬಗ್ಗೆ ತನಿಖೆಯನ್ನು ನಡೆಸಲು ಶ್ರೀ ರಾಧಾಕೃಷ್ಣ ಹೊಳ್ಳ, ಮಾನ್ಯ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿರುತ್ತದೆ. ಪ್ರಸ್ತುತ ವಿಚಾರಣೆಯು ಪ್ರಗತಿಯಲ್ಲಿರುತ್ತದೆ.

ಈ ಮಧ್ಯೆ, ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ- ಉಡುಪಿ ಜಿಲ್ಲೆ – ಈ ಕಾರ್ಖಾನೆಯ ಗುಜರಿ ವಸ್ತುಗಳ ಮಾರಾಟದಲ್ಲಿ ರೂ.14.00 ಕೋಟಿಗಳಿಗೂ ಹೆಚ್ಚಿನ ವಂಚನೆಯನ್ನು ಎಸಗಲಾಗಿದ್ದು, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ಮೇಲೆ ಮತ್ತು ಸರ್ಕಾರದ ಕಾಯಿದೆ, ನಿಯಮ ಮತ್ತು ಬೈಲಾಗಳನ್ನು ದುರುದ್ದೇಶದಿಂದ ಉಲ್ಲಂಘಿಸಿರುವ ವಿರುದ್ಧ ಸೂಕ್ತ ತನಿಖೆಯನ್ನು ನಡೆಸಲು ಕೋರಿ ಪ್ರಧಾನ ಕಾರ್ಯದರ್ಶಿ, ಉಡುಪಿ ಜಿಲ್ಲಾ ರೈತ ಸಂಘ, ಉಡುಪಿ ಜಿಲ್ಲೆ ಇವರು ದಿನಾಂಕ:25.10.2023ರಂದು ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ಅ.ಕ್ರ 203/2023 ಅನ್ನು ದಾಖಲಿಸಿರುತ್ತಾರೆ. ಸದರಿ ದೂರಿನ ಕುರಿತು ವಿಚಾರಣೆಯನ್ನು ನಡೆಸಲಾಗಿದೆಯೆಂದು ಐ.ಪಿ.ಸಿ ಕಲಂ 420, 405, 415, 418, 463, 464, 465,468, 474, 120(ಬಿ) ಜೊತೆಗೆ 34 ಐ.ಪಿ.ಸಿ & ಕಲಂ 23 Karnataka Transparency in Public procurements Act 1999 ರ ಪ್ರಕರಣದಲ್ಲಿ, ಆಪಾದಿತರುಗಳು ಕಲಂ 120(ಬಿ), 403, 409 ಜೊತೆಗೆ 34, 37 ಐಪಿಸಿ ಹಾಗೂ ಕಲಂ 23 Karnataka Transparency in Public procurements Act 1999 ರಂತೆ ಅಪರಾಧವೆಸಗಿರುವುದು ತನಿಖೆಯಿಂದ ದೃಡಪಟ್ಟಿದ್ದು, ಆಪಾದಿತ ಸರಕಾರಿ ನೌಕರ ಪ್ರವೀಣ್ ಬಿ ನಾಯಕ್ ಹಾಗೂ 10 ಮಂದಿ ನಿರ್ದೇಶಕರನ್ನು ನ್ಯಾಯಾಲಯದ

.......3

ಅಭಿಯೋಜನೆಗೆ ಒಳಪಡಿಸಲು ದೋಷಾರೋಪಣಾ ಪಟ್ಟಿ ಸಲ್ಲಿಸಲು ಸರ್ಕಾರದ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ದೊರಕಿಸಿಕೊಡುವಂತೆ ಮಹಾನಿರ್ದೇಶಕರು ಮತ್ತು ಪೋಲೀಸ್ ಮಹಾನಿರೀಕ್ಷಕರು ಕರ್ನಾಟಕ ರಾಜ್ಯ ಬೆಂಗಳೂರು ಇವರ ದಿನಾಂಕ:14.08.2024ರ ಪತ್ರದಲ್ಲಿ ಸರ್ಕಾರದ ಕಾರ್ಯದರ್ಶಿಗಳು,(ಪಿಸಿ.ಎ.ಎಸ್) ಒಳಾಡಳಿತ ಇಲಾಖೆ ಇವರನ್ನು ಕೋರಲಾಗಿರುತ್ತದೆ.

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಅಪರಾಧಗಳು) ಇವರ ದಿನಾಂಕ:23.10.2024ರ ಅನಧಿಕೃತ ಟಿಪ್ಪಣಿಯಲ್ಲಿ, ಅಭಿಯೋಜನಾ ಮಂಜೂರಾತಿಯನ್ನು ನೀಡಲು ಕೋರಿ ಸಲ್ಲಿಸಿದ ಪ್ರಸ್ತಾವನೆಯ ಕುರಿತು ನಿಯಮಾನುಸಾರ ಸೂಕ್ತ ಕ್ರಮವಹಿಸುವಂತೆ ತಿಳಿಸಿ ಸಹಕಾರ ಇಲಾಖೆಗೆ ವರ್ಗಾಯಿಸಲಾಗಿರುತ್ತದೆ.

ಈ ಪ್ರಕರಣದಲ್ಲಿ ಭಾಗಿಯಾಗಿರುವ 11 ಆರೋಪಿಗಳ ಪೈಕಿ ಆರೋಪಿ-01 ಆದ ಶ್ರೀ ಪ್ರವೀಣ್ ಬಿ ನಾಯಕ್, ಸಹಕಾರ ಸಂಘಗಳ ಜಂಟಿ ನಿಬಂಧಕರು ಇವರು ಸಹಕಾರ ಇಲಾಖೆ ಅಧಿಕಾರಿಯಾಗಿರುವುದರಿಂದ ಇವರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ಸಿಓ 60 ಇಸಿಎ 2025, ದಿನಾಂಕ:27.02.2025ರಲ್ಲಿ ಸಹಕಾರ ಇಲಾಖೆಯಿಂದ ಅಭಿಯೋಜನಾ ಮಂಜೂರಾತಿ ನೀಡಲಾಗಿರುತ್ತದೆ. ಉಳಿದಂತೆ, ಇನ್ನುಳಿದ 10 ಮಂದಿ ಆರೋಪಿತರು ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಯ ನಿರ್ದೇಶಕರುಗಳಾಗಿರುವುದರಿಂದ ಸದರಿಯವರುಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಲು ಅಭಿಯೋಜನಾ ಮಂಜೂರಾತಿ ನೀಡುವ ಬಗ್ಗೆ ಸಕ್ಷಮ ಪ್ರಾಧಿಕಾರವಾದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಮುಂದಿನ ಕ್ರಮ ಕೈಗೊಳ್ಳಲು ಕೋರಿ ದಿನಾಂಕ:28.02.2025ರಂದು ಪ್ರಸ್ತಾವನೆಯನ್ನು ಸಹಕಾರ ಇಲಾಖೆಯಿಂದ ವರ್ಗಾಯಿಸಲಾಗಿರುತ್ತದೆ. ಪ್ರಸ್ತುತ ಸದರಿ 10 ನಿರ್ದೇಶಕರುಗಳ ಮೇಲೆ ಭ್ರಷ್ಟಾಚಾರ ಪ್ರತಿಬಂಧ ಅಧಿನಿಯಮ 1988ರನ್ವಯ ಈ ಇಲಾಖೆಯಿಂದ ಅಭಿಯೋಜನಾ ಮಂಜೂರಾತಿ ನೀಡಲು ಇರುವ ಅವಕಾಶಗಳ ಕುರಿತು ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿದ್ದು ಸದರಿ ಅಭಿಪ್ರಾಯದನ್ವಯ ಮುಂದಿನ ಕ್ರಮವಹಿಸಲಾಗುವುದು.

---

ಸಂಖ್ಯೆ: ಸಿಐ 75 ಸಿಓಎಫ್ 2025

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು